**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ, ಹೊಳಲ್ಕೆರೆ.**

**ಸಿ.ಸಿ. ನಂ. 953/2020**

ದಿನಾಂಕ 28/10/2025

| | | | | |
|---|---|---|---|---|
| ಸಾಕ್ಷಿದಾರರ ಹೆಸರು | : | ರುದ್ರಯ್ಯ | ಪಿ.ಡಬ್ಲ್ಯು. | 2 |
| ತಂದೆಯ ಹೆಸರು | : | ಮರಿಗೆಂಚಪ್ಪ | ಸಿ.ಡಬ್ಲ್ಯು. | 2 |
| ವಯಸ್ಸು | : | 49 ವರ್ಷ | | |
| ಉದ್ಯೋಗ | : | ವ್ಯವಸಾಯ | | |
| ವಾಸ ಸ್ಥಳ | : | ತಾಳಿಕಟ್ಟೆ ಗ್ರಾಮ | | |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ – ಮಾನ್ಯ ಸ.ಸ.ಅ. ರವರಿಂದ**

ಆರೋಪಿ ನನಗೆ ಗೊತ್ತಿಲ್ಲ. ಚಾ.ಸಾ–1 ಮತ್ತು 3 ಗೊತ್ತಿಲ್ಲ.

ಈಗ ನನಗೆ ತೋರಿಸಿದ ಸ್ಥಳ ಪಂಚನಾಮೆಯಲ್ಲಿ ನನ್ನ ಸಹಿ ಇದೆ. ಸದರಿ ಸ್ಥಳ ಪಂಚನಾಮೆಯನ್ನು ಈಗಾಗಲೇ ನಿ.ಪಿ.2 ಎಂದು ಗುರುತಿಸಲಾಗಿದ್ದು ಸಾಕ್ಷಿಯು ಅದರಲ್ಲಿರುವ ತನ ಸಹಿಯನ್ನು ಗುರುತಿಸಿದ ಮೇರೆಗೆ ನಿ.ಪಿ.2 (ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 7–8 ವರ್ಷಗಳ ಹಿಂದೆ ನಮ್ಮ ಮನೆಯ ಹತ್ತಿರ ಪೋಲಿಸರು ಬಂದು ಸಹಿ ಮಾಡು ಎಂದು ಹೇಳಿದ ಮೇರೆಗೆ ಸಹಿ ಮಾಡಿರುತ್ತೇನೆ. ನಿಪಿಃ 2 ರ ಪಂಚನಾಮೆಯಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ಪಂಚನಾಮೆ ಕ್ರಮ ಜರುಗಿಸಿರುವುದಿಲ್ಲ. ಈಗ ನನಗೆ ತೋರಿಸಿದ ನಿಪಿ–3 ರ ಕಚ್ಚಾ ನಕಾಶೆಯಲ್ಲಿ ನನ್ನ ಸಹಿ ಇದೆ. ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿದ ಮೇರೆಗೆ ನಿ.ಪಿ.3(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 7–8 ವರ್ಷಗಳ ಹಿಂದೆ ನಮ್ಮ ಮನೆಯ ಹತ್ತಿರ ಪೋಲಿಸರು ಬಂದು ಸಹಿ ಮಾಡು ಎಂದು ಹೇಳಿದ ಮೇರೆಗೆ ಸಹಿ ಮಾಡಿರುತ್ತೇನೆ. ನಿಪಿಃ 3 ರ ಕಚ್ಚಾ ನಕಾಶೆಯಲ್ಲಿರುವ ವಿಷಯ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ಕಚ್ಚಾ ನಕಾಶೆ ತಯಾರಿಸಿಲ್ಲ.

ಈ ಹಂತದಲ್ಲಿ ಸಾಕ್ಷಿಗೆ ನಿಪಿಃ 4 ಮತ್ತು 5 ರ ಪೋಟೋಗಳನ್ನು ತೋರಿಸಲಾಗಿದ್ದು, ಸಾಕ್ಷಿಯು ಸದರಿ ಪೋಟೋಗಳನ್ನು ನೋಡಿ ಅದರಲ್ಲಿ ತಾನು ಇರುವುದನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಪೋಟೋಗಳನ್ನು ಯಾವ ಕಾರಣಕ್ಕೆ ಎಲ್ಲಿ ತೆಗೆಯಲಾಗಿತ್ತು ಎಂದು ನನಗೆ ಗೊತ್ತಿಲ್ಲ. ಪೋಲೀಸರು ಊರಿನ ಇನ್ಸ್ಪೆಕ್ಷನ್ ಮಾಡಲು ಬಂದಿರುತ್ತೇವೆ ಪೋಟೋ ತೆಗೆಸಿಕೊಳ್ಳಿ ಎಂದು ತಿಳಿಸಿದ್ದರಿಂದ ನಾನು ನಿಂತು ಪೋಟೋ ತೆಗೆಸಿಕೊಂಡಿರುತ್ತೇನೆ.

**(ಈ ಹಂತದಲ್ಲಿ ಸರ್ಕಾರಿ ಅಭಿಯೋಜಕರು ಸಾಕ್ಷಿಯು ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ, ಅನುಮತಿ ನೀಡಲಾಯಿತು)**

**<u>ಪಾಟೀಸವಾಲು : ಮಾನ್ಯ ಎ.ಪಿ.ಪಿ.ಯವರಿಂದ</u>**

ದಿನಾಂಕಃ 06/10/2018 ರಂದು ಪೋಲೀಸರು ಅಪಘಾತ ಸಂಭವಿಸಿದ ಸ್ಥಳದಲ್ಲಿ ಪಂಚನಾಮೆ ಕ್ರಮ ಜರುಗಿಸಲು ಬಂದಿದ್ದರು ಎಂದರೆ ಸರಿಯಲ್ಲ. ಸದರಿ ಪಂಚನಾಮೆ ಕಾಲಕ್ಕೆ ಚಾ.ಸಾಃ 1 ಮತ್ತು 3 ರವರು ಹಾಜರಿದ್ದರು ಎಂದರೆ ಸರಿಯಲ್ಲ. ಸದರಿ ಪಂಚನಾಮೆ ಕಾಲಕ್ಕೆ ಪೋಲೀಸರು ಅಪಘಾತದ ವಿಚಾರಗಳನ್ನೆಲ್ಲ ನನಗೆ ತಿಳಿಸಿ ಪಂಚರಾಗಿ ಸಹಕರಿಸಲು ಕೋರಿಕೊಂಡಿದ್ದರು ಎಂದರೆ ಸರಿಯಲ್ಲ. ಪಂಚನಾಮೆ ಕ್ರಮ ಜರುಗಿಸಲು ಸ್ಥಳವನ್ನು ಚಾ.ಸಾಃ 1 ರವರು ತೋರಿಸಿದ್ದರು ಎಂದರೆ ಸರಿಯಲ್ಲ. ಸದರಿ ಪಂಚನಾಮೆಯ ಸುಮಾರು ಬೆಳಿಗ್ಗೆ 10 ರಿಂದ 11 ಗಂಟೆಯವರೆಗೆ ಜರುಗಿಸಿದ್ದರು ಎಂದರೆ ಸರಿಯಲ್ಲ. ಪಂಚನಾಮೆ ಕಾಲದಲ್ಲಿ ಸ್ಥಳದಲ್ಲಿಯೇ ನಾನು ಮತ್ತು ಚಾ.ಸಾಃ 1 ಮತ್ತು 3 ರವರು ಹಾಜರಿದ್ದು, ನಿಪಿಃ 2 ರ ಎಲ್ಲ ವಿಚಾರಗಳನ್ನು ತಿಳಿದುಕೊಂಡು ಅದಕ್ಕೆ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ನಿಪಿಃ 3 ಮತ್ತು 4 ರ ಪೋಟೋಗಳನ್ನು ನನ್ನ ಜೊತೆ ಚಾ.ಸಾಃ 3 ರವರು ಸಹ ಹಾಜರಿದ್ದರು ಎಂದರೆ ಸರಿ. ನಿಪಿಃ 4 ಮತ್ತು 5 ರ ಪೋಟೋಗಳನ್ನು ಅಪಘಾತವಾದ ಸ್ಥಳದಲ್ಲಿ ತೆಗೆಯಲಾಗಿತ್ತು ಎಂದರೆ ನನಗೆ ಗೊತ್ತಿಲ್ಲ. ಸದರಿ ಜಾಗದಲ್ಲಿಯೇ ಮೃತ ನಾಗಪ್ಪರವರಿಗೆ ಅಪಘಾತ ಸಂಭವಿಸಿರುತ್ತದೆ ಎಂದರೆ ಸರಿಯಲ್ಲ. ಸದರಿ ಸ್ಥಳವನ್ನೇ ನಿಪಿಃ 4 ಮತ್ತು 5 ರಲ್ಲಿ ಚಾ.ಸಾಃ 1 ರವರು ಪೋಲೀಸರಿಗೆ ತೋರಿಸುತ್ತಿದ್ದಾರೆ ಎಂದರೆ ನನಗೆ ಗೊತ್ತಿಲ್ಲ.

ನಿಪಿ-2 ರಿಂದ 5 ರ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀಸವಾಲು – ಆರೋಪಿ ಪರ ವಕೀಲರಿಂದ – ಇರುವುದಿಲ್ಲ</u>**

**ಮರು ವಿಚಾರಣೆ – ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ. ಸರಿ ಇದೆ.

C/C **ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ.**